**ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೇ ನ್ಯಾಯಿಕ ದಂಡಾಧಿಕಾಗಳ ನ್ಯಾಯಾಲಯ,**

**ಯಾದಗಿರಿ**

**ಸಿ.ಸಿ. ನಂ..1155/2024**

**ಫಿರ್ಯಾದುದಾರರುಃ** ಶ್ರೀ ದಿನೇಶ್ ಶರ್ಮಾ ತಂದೆ ಸೂರ್ಯಪ್ರಕಾಶ್ ಶರ್ಮಾ,

**ವಿರುದ್ಧ**

**ಆಪಾದಿತಃ** ಶ್ರೀ ರಾಜ್‌ಕುಮಾರ್ ಖಂಡೆಲವಾಲ ತಂದೆ ಮೋಹನಲಾಲ ಖಂಡೆಲವಾಲ,

**ಆಪಾದನೆ**

**ಶ್ರೀ ಅರುಣ ಚೌಗುಲೆ ಬಿ.ಎ.,ಎಲ್.ಎಲ್.ಬಿ.,(Honor) ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಯಾದಗಿರಿ ಆದ ನಾನು ಮೇಲ್ಕಂಡ ಆರೋಪಿತರಾದ ನಿಮ್ಮ ಮೇಲೆ ಕೆಳಕಂಡಂತೆ ದೋಷರೋಪಣೆಯನ್ನು ಹೊರಿಸುತ್ತಿದ್ದೇನೆ.**

ಪಿರ್ಯಾದಿದಾರರು ಮತ್ತು ಆಪಾದಿತನಾದ ನೀವು ಪರಿಚಯಸ್ಥರಾಗಿರುತ್ತೀರಿ ಹಾಗೂ ಸದರಿ ಪರಿಚಯದ ಆಧಾರದ ಮೇಲೆ ನೀವು ದೂರುದಾರರಿಂದ ದಿನಾಂಕ **29.10.2021** ರಂದು ರೂ.**8,46,500/-** ಗಳನ್ನು ಸಾಲಪಡೆದಿದ್ದು, ಸದರಿ ಹಣವನ್ನು ಮರುಪಾವತಿ ಮಾಡುವಂತೆ ಒತ್ತಾಯಿಸಿದಾಗ ಆಪಾದಿತನಾದ ನೀವು ಖಾತೆ ಹೊಂದಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಯಾದಗಿರಿ ಶಾಖೆಗೆ ಸೇರಿದ **017740** ಸಂಖ್ಯೆಯ ಚೆಕ್ ನಲ್ಲಿ ರೂ. **8,46,500/-** ಹಾಗೂ ದಿನಾಂಕ **30.01.2024** ಎಂದು ನಮೂದು ಮಾಡಿ ಬ್ಯಾಂಕಿಗೆ ಹಾಜರುಪಡಿಸಿ ನಗದೀಕರಿಸಿಕೊಳ್ಳುವಂತೆ ನೀಡಿದ್ದಿರಿ. ಸದರಿ ಚೆಕ್‌ನ್ನು ಪಿರ್ಯಾದುದಾರರು ನಗದೀರಣಕ್ಕಾಗಿ ತಾವು ಖಾತೆ ಹೊಂದಿರುವ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಯಾದಗಿರಿ ಶಾಖೆಯ ಮೂಲಕ ದಿನಾಂಕ **30.01.2024** ರಂದು ಹಾಜರು ಪಡಿಸಿದಾಗ, “Account Closed” ಎಂಬ ಹಿಂಬರಹದೊಂದಿಗೆ ಅಮಾನ್ಯಗೊಂಡು ಚೆಕ್ಕನ್ನು ದಿನಾಂಕ **31.01.2024** ರಂದು ವಾಪಸ್ಸು ನೀಡಿರುತ್ತಾರೆ. ನಂತರ ಪಿರ್ಯಾದುದಾರರು ತಮ್ಮ ವಕೀಲರ ಮೂಲಕ ದಿನಾಂಕ **27.02.2024** ರಂದು ಅಪಾದಿತನಾದ ನಿಮ್ಮ ವಿಳಾಸಕ್ಕೆ ನೊಂದಾಯಿತ ಅಂಚೆಯ ಮೂಲಕ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದು, ಸದರಿ ನೋಟಿಸ್ ದಿನಾಂಕ **29.02.2024** ರಂದು ಜಾರಿಯಾಗಿರುತ್ತದೆ. ಆಪಾದಿತನಾದ ನೀವು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣ ಇಲ್ಲದಿದ್ದರು ದೂರುದಾರರಿಗೆ ಚೆಕ್‌ನ್ನು ನೀಡಿ ನಂತರ ಚೆಕ್ ಮೊತ್ತವನ್ನು ಪಾವತಿ ಮಾಡದೆ ಇರುವುದರ ಮೂಲಕ

ವರ್ಗಾವಣೀಯ ಲಿಖಿತ ಕಾಯ್ದೆ ಕಲಂ **138**ರ ರಿತ್ಯಾ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಾ ಎಂದು ಆಪಾದಿಸಲಾಗಿದೆ.

ಪ್ರಶ್ನೆ- 1 : ನಿಮ್ಮ ಮೇಲೆ ಹೊರಿಸಲಾಗಿರುವ ಆಪಾದನೆಯನ್ನು
ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರ :

ಪ್ರಶ್ನೆ-2 : ನೀವು ಸದರೀ ಆಪಾದನೆಯನ್ನು ಒಪ್ಪಿಕೊಳ್ಳುವಿರಾ? ಅಥವಾ
ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೆ ?

ಉತ್ತರ :

(ಮೇಲ್ಕಂಡಂತೆ ಆಪಾದನೆಯನ್ನು ಆಪಾದಿತನಿಗೆ ತಿಳಿದ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರಗಳನ್ನು ಬರೆದುಕೊಂಡಿರುವುದಾಗಿ ದೃಢೀಕರಿಸಲಾಗಿದೆ.)

ದಿನಾಂಕಃ 11.06.2025.
ಸ್ಥಳಃ ಯಾದಗಿರ

ದಿವಾಣಿ ನ್ಯಾಯಾಧಿಶರು
ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,
**ಯಾದಗಿರಿ.**